**All India Radio: Bangalore**
**Regional Bulletin In Kannada**
**23.03.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**23.03.2025 / 6.40 p.m.**
**<><><><>**

ಮುಖ್ಯಾಂಶಗಳು

1. ರಾಷ್ಟ್ರೀಯ ಏಕತೆಯನ್ನು ಉತ್ತೇಜಿಸಲು ಮಂಡಲ ಮಟ್ಟದಲ್ಲಿ ಸಾಮೂಹಿಕ ಸಂಪರ್ಕ ಕಾರ್ಯಕ್ರಮ - ಆರ್‌ಎಸ್‌ಎಸ್ ಸಹಕಾರಿವಾಹ ದತ್ತಾತ್ರೇಯ ಹೊಸಬಾಳೆ
2. ಆರ್ಥಿಕ ಸಂಕಷ್ಟದಲ್ಲಿರುವ ವಿಶ್ವವಿದ್ಯಾಲಯಗಳಿಗೆ ರಾಜ್ಯ ಸರ್ಕಾರದಿಂದ ನೆರವು - ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್
3. ಹದಿನೆಂಟು ಬಿಜೆಪಿ ಶಾಸಕರ ಅಮಾನತು ಕಾನೂನು ಬಾಹಿರ - ಸಂಸದ ಜಗದೀಶ್ ಶೆಟ್ಟರ್ ಆಕ್ಷೇಪ
4. ಸಕಲೇಶಪುರದಲ್ಲಿ ಉಪಟಳ ನೀಡುತ್ತಿದ್ದ ಕಾಡಾನೆ ಸೆರೆ

<><><><>

ರಾಷ್ಟ್ರೀಯ ಸ್ವಯಂಸೇವಕ ಸಂಘವು ತನ್ನ ಶತಮಾನೋತ್ಸವ ವರ್ಷದಲ್ಲಿ ಹಲವಾರು ಜನಸಂಪರ್ಕ ಕಾರ್ಯಕ್ರಮಗಳನ್ನು ಯೋಜಿಸಿದೆ. ಬೆಂಗಳೂರಿನಲ್ಲಿ ಇಂದು ನಡೆದ ಅಖಿಲ ಭಾರತೀಯ ಪ್ರತಿನಿಧಿ ಸಭಾದ ಮೂರು ದಿನಗಳ ರಾಷ್ಟ್ರೀಯ ಸಭೆಯ ಸಮಾರೋಪದಲ್ಲಿ ಆರ್‌ಎಸ್‌ಎಸ್ ಸಹಕಾರಿವಾಹ ದತ್ತಾತ್ರೇಯ ಹೊಸಬಾಳೆ ಈ ವಿಷಯ ತಿಳಿಸಿದರು. ವಿಜಯದಶಮಿ ದಿನದಂದು ವಿವಿಧ ಜನಸಂಪರ್ಕ ಕಾರ್ಯಕ್ರಮಗಳನ್ನು ಪ್ರಾರಂಭಿಸಲಾಗುವುದು. ಈ ಜನಸಂಪರ್ಕ ಕಾರ್ಯಕ್ರಮಗಳು ಸಮಾಜದ ಸುಧಾರಣೆಗಾಗಿ ವಿವಿಧ ಚಟುವಟಿಕೆಗಳಲ್ಲಿ ಸಾಮಾಜಿಕ ಭಾಗವಹಿಸುವಿಕೆಯನ್ನು ಬಯಸುತ್ತವೆ ಎಂದು ಅವರು ಹೇಳಿದರು. ಸಾಮಾಜಿಕ ಸಾಮರಸ್ಯ ಮತ್ತು ರಾಷ್ಟ್ರೀಯ ಏಕತೆಯನ್ನು ಉತ್ತೇಜಿಸಲು ತಳಮಟ್ಟದಲ್ಲಿ ಮಂಡಲ ಮತ್ತು ಬಸ್ತಿ ಮಟ್ಟದಲ್ಲಿ ಸಾಮೂಹಿಕ ಸಂಪರ್ಕ ಕಾರ್ಯಕ್ರಮಗಳನ್ನು ನಡೆಸಲಾಗುವುದು ಎಂದು ದತ್ತಾತ್ರೇಯ ಹೊಸಬಾಳೆ ಮಾಹಿತಿ ನೀಡಿದರು. ಔರಂಗಜೇಬ್ ಸಮಾಧಿ ಕುರಿತ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಔರಂಗಜೇಬ್ ಭಾರತೀಯ ನೀತಿ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಪ್ರತಿನಿಧಿಸುವುದಿಲ್ಲ. ಔರಂಗಜೇಬ್ ಐಕಾನ್ ಆಗಬಹುದೇ ಎಂಬುದನ್ನು ಸಮಾಜ ನಿರ್ಧರಿಸಬೇಕು ಎಂದು ಹೇಳಿದರು. ಧರ್ಮಾಧಾರಿತ ಮೀಸಲಾತಿ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದ ದತ್ತಾತ್ರೇಯ ಹೊಸಬಾಳೆ, ಧರ್ಮಾಧಾರಿತ ಮೀಸಲಾತಿ ಸಾಂವಿಧಾನಿಕವಲ್ಲ ಮತ್ತು ಅನೇಕ ನ್ಯಾಯಾಲಯಗಳು ಅಂತಹ ಕ್ರಮವನ್ನು ತಿರಸ್ಕರಿಸಿವೆ ಎಂದು ಹೇಳಿದರು.

ಧ್ವನಿ: ದತ್ತಾತ್ರೇಯ ಹೊಸಬಾಳೆ ೨೧ ಸೆಕೆಂಡ್‌ಗಳು

<><><><>

ರಾಜ್ಯದ ಹಂಪಿ ಕನ್ನಡ ವಿಶ್ವವಿದ್ಯಾಲಯ, ಜಾನಪದ ವಿಶ್ವವಿದ್ಯಾಲಯ, ಸಂಗೀತ ವಿಶ್ವವಿದ್ಯಾಲಯಗಳಂತ ವಿಶೇಷ ವಿಶ್ವವಿದ್ಯಾಲಯಗಳ ಆರ್ಥಿಕ ಸಂಕಷ್ಟದ ಅರಿವು ಸರ್ಕಾರಕ್ಕಿದೆ. ಈ ವಿಶ್ವವಿದ್ಯಾಲಯಗಳ ನೆರವಿಗೆ ಧಾವಿಸಲು ಮುಖ್ಯಮಂತ್ರಿಗಳ ಜೊತೆ ಚರ್ಚಿಸಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಹಂಪಿ ಕನ್ನಡ ವಿಶ್ವವಿದ್ಯಾಲಯ, ಜಾನಪದ ವಿಶ್ವವಿದ್ಯಾಲಯ, ಸಂಗೀತ ವಿಶ್ವವಿದ್ಯಾಲಯಗಳು ವಿಶೇಷ ವಿಶ್ವವಿದ್ಯಾಲಯಗಳಾಗಿದ್ದು, ಇವುಗಳು ಸ್ವಂತ ಶಕ್ತಿಯ ಮೇಲೆ ಆರ್ಥಿಕ ಕ್ರೋಢೀಕರಣ ಮಾಡಿಕೊಂಡು, ಸುಸ್ಥಿರ ಅಭಿವೃದ್ಧಿ, ಬೆಳವಣಿಗೆ ಹೊಂದಲು ಸಾಧ್ಯವಾಗುತ್ತಿಲ್ಲ ಎಂದರು. ರಾಜ್ಯ ಸರ್ಕಾರ ಈ ವಿಶೇಷ ವಿಶ್ವವಿದ್ಯಾಲಯಗಳಿಗೆ ಆರ್ಥಿಕವಾಗಿ ಸ್ಪಂದಿಸಿ, ಸಮಸ್ಯೆಗಳನ್ನು ಪರಿಹರಿಸಲು ಚಿಂತನೆ ನಡೆಸಿದೆ. ಈ ಕುರಿತು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ತೀರ್ಮಾನಿಸಲಾಗುವುದು ಎಂದು ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದರು.

<><><><>

ಜನರಿಗೆ ಖಾಸಗಿ ಆಸ್ಪತ್ರೆಗಳ ಮಾದರಿಯಲ್ಲಿ ವೈದ್ಯಕೀಯ ಸೇವೆ ಒದಗಿಸುವ ನಿಟ್ಟಿನಲ್ಲಿ ಆರೋಗ್ಯ ಮೇಳ ಆಯೋಜಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ರಾಷ್ಟ್ರೀಯ ಆರೋಗ್ಯ ಅಭಿಯಾನ, ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ವಿಜ್ಞಾನ ಸಂಸ್ಥೆ ಬೆಳಗಾವಿಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಬೆಳಗಾವಿ ಜಿಲ್ಲೆ ಸವದತ್ತಿಯಲ್ಲಿ ಇಂದು ನಡೆದ ಬೃಹತ್ ಆರೋಗ್ಯ ಮೇಳ ಉದ್ಘಾಟಿಸಿ ಅವರು ಮಾತನಾಡಿದರು. ಸುಮಾರು ೪೬ ಕೋಟಿ ರೂಪಾಯಿ ವೆಚ್ಚದಲ್ಲಿ ಸವದತ್ತಿಯಲ್ಲಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಲಾಗುವುದು. ರಾಮದುರ್ಗ, ಕಿತ್ತೂರು ತಾಲೂಕುಗಳಲ್ಲಿ ಸಹ ನೂತನ ಸುಸಜ್ಜಿತ ಆಸ್ಪತ್ರೆ ನಿರ್ಮಾಣಕ್ಕೆ ಕ್ರಮ ವಹಿಸಲಾಗಿದೆ ಎಂದು ಅವರು ತಿಳಿಸಿದರು. ಬೆಳಗಾವಿ ಜಿಲ್ಲೆಯಲ್ಲಿ ಅಂಧತ್ವ ನಿವಾರಣಾ ಯೋಜನೆಯಡಿ ೩೮ ಸಾವಿರ ರೋಗಿಗಳಿಗೆ ನೇತ್ರ ಚಿಕಿತ್ಸೆ ಕೈಗೊಳ್ಳಲಾಗಿದೆ. ಮುಂಬರುವ ದಿನಗಳಲ್ಲಿ ಗೃಹ ಆರೋಗ್ಯ ಯೋಜನೆಯಡಿ ಪ್ರತಿ ಕುಟುಂಬ, ಪ್ರತಿ ವ್ಯಕ್ತಿಯ ತಪಾಸಣೆ ಕಾರ್ಯಕ್ರಮ ಹಮ್ಮಿಕೊಂಡು, ಮನೆಗಳಿಗೆ ಔಷಧಗಳನ್ನು ಒದಗಿಸಲು ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಮಾತನಾಡಿ, ಸವದತ್ತಿಯ ಭಾಗದ ಅಭಿವೃದ್ಧಿಗೆ ೨೦೦ ಕೋಟಿ ಅನುದಾನವನ್ನು ರಾಜ್ಯ ಸರ್ಕಾರ ಒದಗಿಸಿದೆ ಎಂದು ತಿಳಿಸಿದರು.

<><><><>

ಬಿಜೆಪಿಯ ೧೮ ಶಾಸಕರನ್ನು ಅಮಾನತು ಮಾಡುವ ಮೂಲಕ ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್, ಶಾಸಕರ ಹಕ್ಕುಗಳನ್ನು ಕಸಿದು, ಸಂವಿಧಾನ ಬಾಹಿರ ನಡೆ ಅನುಸರಿಸಿದ್ದಾರೆ ಎಂದು ಸಂಸದ ಜಗದೀಶ ಶೆಟ್ಟರ್ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಾಸಕರ ಅಮಾನತು ನಿರ್ಧಾರವನ್ನು ವಿಧಾನ ಸಭಾಧ್ಯಕ್ಷರು ಕೂಡಲೇ ವಾಪಸ್ ಪಡೆಯಬೇಕು ಎಂದು ಆಗ್ರಹಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪ್ರಚೋದನೆಯಿಂದಲೇ ವಿಧಾನ ಸಭಾಧ್ಯಕ್ಷರು ಬಿಜೆಪಿ ಶಾಸಕರನ್ನು ಅಮಾನತು

ಮಾಡಿದ್ದಾರೆ ಎಂದು ಸಂಸದ ಜಗದೀಶ ಶೆಟ್ಟರ್ ಆರೋಪಿಸಿದರು. ಸದನದಲ್ಲಿ ಎಲ್ಲರೂ ಶಿಸ್ತು ಕಾಪಾಡಿಕೊಳ್ಳಬೇಕು. ಅಶಿಸ್ತು ಪ್ರದರ್ಶಿಸಿದ್ದರೆ ಶಿಸ್ತುಕ್ರಮ ಕೈಗೊಳ್ಳುವ ಅಧಿಕಾರ ವಿಧಾನ ಸಭಾಧ್ಯಕ್ಷರಿಗಿದೆ. ಆದರೆ, ಅಮಾನತು ಮಾಡಿರುವುದು ಸರಿಯಲ್ಲ. ಸರ್ಕಾರ ಭಂಡತನ ತೋರಿದಾಗ, ಬಿಜೆಪಿ ಶಾಸಕರು ಪ್ರತಿಭಟನೆ ಮಾಡಿದ್ದಾರೆ. ನಿಯಮ ಬಾಹಿರ ಎನಿಸಿದ್ದರೆ, ವಿಧಾನ ಸಭಾಧ್ಯಕ್ಷರು ತಮ್ಮ ಕಚೇರಿಗೆ ಕರೆಯಿಸಿ ಬುದ್ಧಿ ಹೇಳಿ, ಎಚ್ಚರಿಕೆ ನೀಡಬಹುದಿತ್ತು. ಆರು ತಿಂಗಳು ಅಮಾನತು ಮಾಡಿದ್ದು ಅತ್ಯಂತ ಖಂಡನೀಯ ಎಂದರು. ಹನಿಟ್ರ್ಯಾಪ್ ಪ್ರಕರಣವನ್ನು ಸರ್ಕಾರ ಸಿಬಿಐ ತನಿಖೆಗೆ ವಹಿಸಬೇಕು ಎಂದು ಇದೇ ವೇಳೆ ಸಂಸದ ಜಗದೀಶ ಶೆಟ್ಟರ್ ಆಗ್ರಹಿಸಿದರು.

<><><><>

ಹಾಸನ ಜಿಲ್ಲೆ ಸಕಲೇಶಪುರ ತಾಲೂಕಿನ ಹೆಬ್ಬನಹಳ್ಳಿ ಗ್ರಾಮದ ಬಳಿ ಉಪಟಳ ನೀಡುತ್ತಿದ್ದ ಕಾಡಾನೆಯನ್ನು ಅರಣ್ಯ ಇಲಾಖೆ ಸಿಬ್ಬಂದಿ ಯಶಸ್ವಿಯಾಗಿ ಸೆರೆಹಿಡಿದಿದ್ದಾರೆ. ಇದರೊಂದಿಗೆ ಕಳೆದ ಒಂದು ವಾರದಲ್ಲಿ ಒಟ್ಟು ಮೂರು ಕಾಡಾನೆಗಳನ್ನು ಅರಣ್ಯ ಇಲಾಖೆ ಸೆರೆಹಿಡಿದಂತಾಗಿದ್ದು, ಈ ಭಾಗದ ಜನರು ನಿಟ್ಟುಸಿರು ಬಿಟ್ಟಿದ್ದಾರೆ. ಹಾಸನ ಜಿಲ್ಲೆಯ ಸಕಲೇಶಪುರ, ಬೇಲೂರು ಸುತ್ತಮುತ್ತ ಜನರಿಗೆ ತೀವ್ರ ಉಪಟಳ ನೀಡುತ್ತಿದ್ದ ಕಾಡಾನೆಗಳನ್ನು ಹಿಡಿಯಲು ಅರಣ್ಯ ಇಲಾಖೆ ಇದೇ ೧೯ರಿಂದ ಕಾರ್ಯಾಚರಣೆ ಆರಂಭಿಸಿತ್ತು. ಯಶಸ್ವಿ ಕಾರ್ಯಾಚರಣೆ ನಡೆಸಿದ ಅರಣ್ಯ ಇಲಾಖೆಯ ಅಧಿಕಾರಿಗಳು, ಮಾವುತರು, ಪಶುವೈದ್ಯರು, ಮುಂಚೂಣಿ ಕಾರ್ಯಕರ್ತರಿಗೆ ಅರಣ್ಯ ಸಚಿವ ಈಶ್ವರ ಖಂಡ್ರೆ ಅಭಿನಂದನೆ ಸಲ್ಲಿಸಿದ್ದಾರೆ. ಮಾನವ-ಆನೆ ಸಂಘರ್ಷ ನಿಯಂತ್ರಿಸಲು ರಾಜ್ಯ ಸರ್ಕಾರ ಎಲ್ಲ ಅಗತ್ಯ ಕ್ರಮ ಕೈಗೊಳ್ಳಲಿದೆ ಎಂದು ಇದೇ ವೇಳೆ ಸಚಿವರು ಭರವಸೆ ನೀಡಿದ್ದಾರೆ.

<><><><>

ನಾಡು ಕಂಡ ಶ್ರೇಷ್ಠ ಸಾಹಿತಿಗಳಲ್ಲಿ ಕೆ.ಎಸ್.ನರಸಿಂಹಸ್ವಾಮಿ ಅವರು ಅಪರೂಪದ ಸಾಹಿತಿ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದ್ದಾರೆ. ಮಂಡ್ಯ ನಗರದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರದಲ್ಲಿ ನಡೆದ ಕೆ.ಎಸ್.ನರಸಿಂಹಸ್ವಾಮಿ ಸಾಹಿತ್ಯ ಪ್ರಶಸ್ತಿ ಹಾಗೂ ಕಾವ್ಯ ಗಾಯನ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಕೆ.ಎಸ್.ನರಸಿಂಹಸ್ವಾಮಿಯವರು ಮಲ್ಲಿಗೆ ಕವಿ ಎಂದೇ ಮನೆ ಮನೆ ಮಾತಾಗಿದ್ದಾರೆ ಎಂದರು. ಸಾಹಿತಿ ಡಾ. ನಾ. ದಾಮೋದರ ಶೆಟ್ಟಿ ಮಾತನಾಡಿ, ಕೆ.ಎಸ್. ನರಸಿಂಹಸ್ವಾಮಿಯವರು ಪ್ರೇಮ ಕವಿಯಾದರೂ ಎಂದಿಗೂ ತಮ್ಮ ಚೌಕ್ಕಟನ್ನು ಮೀರಿ ಕಾವ್ಯ ರಚಿಸಿದವರಲ್ಲ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಾಹಿತಿಗಳಾದ ಪ್ರೊ.ಜಯಪ್ರಕಾಶ್ ಗೌಡ, ಡಾ.ನಾ. ದಾಮೋದರ ಶೆಟ್ಟಿ ಅವರಿಗೆ ಸಾಹಿತ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು ಹಾಗೂ ಗಾಯಕರಾದ ಸಂಗೀತಾ ಕಟ್ಟಿ, ರಮೇಶ್ ಚಂದ್ರ ಅವರಿಗೆ ಕಾವ್ಯ ಗಾಯನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

<><><><>

ವಿದ್ಯಾರ್ಥಿಗಳಲ್ಲಿ ಹಾಗೂ ಬೋಧಕರಲ್ಲಿ ಬದ್ಧತೆಯಿದ್ದರೆ ಮಾತ್ರ ಜ್ಞಾನ ಪ್ರವಾಹ ಹರಿಯಲು ಸಾಧ್ಯ ಎಂದು ಮಾಜಿ ಮುಖ್ಯಮಂತ್ರಿ ಎಂ.ವೀರಪ್ಪ ಮೊಯ್ಲಿ ಹೇಳಿದ್ದಾರೆ. ಧಾರವಾಡದ ಡಾ. ಜಿ.ಎಂ.ಪಾಟೀಲ ಕಾನೂನು ಕಾಲೇಜಿನಲ್ಲಿ

ಏರ್ಪಡಿಸಿದ್ದ ಕೆಪಿಇ ಸಂಸ್ಥೆ ಸಂಸ್ಥಾಪಕ ಡಾ.ಜಿ.ಎಂ.ಪಾಟೀಲ ಶತಮಾನೋತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಯಾವುದೇ ಭೇದ ಭಾವ ಮಾಡದೆ, ಕಲಿಯುವ ಆಸಕ್ತಿಯಿಂದ ಬಂದವರಿಗೆ ಕಾನೂನು ಶಿಕ್ಷಣ ನೀಡಿದ ಡಾ. ಜಿ.ಎಂ.ಪಾಟೀಲರ ಕಾರ್ಯ ಅನುಕರಣೀಯ ಎಂದರು. ಕಾನೂನು ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಧಾರವಾಡಕ್ಕೆ ಹೈಕೋರ್ಟ್ ಪೀಠ ಬರುವಲ್ಲಿ ಡಾ. ಜಿ.ಎಂ.ಪಾಟೀಲರ ಪ್ರಯತ್ನವನ್ನು ಮರೆಯಲು ಸಾಧ್ಯವಿಲ್ಲ ಎಂದು ಹೇಳಿದರು.

<><><>

ಬೆಳಗಾವಿಯ ಸಿಪಿಎಡ್ ಮೈದಾನದಲ್ಲಿ ನಾಳೆ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ರಾಜ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಬೆಳಗಾವಿ ಗ್ರಾಮೀಣ ಮತಕ್ಷೇತ್ರದ ೩ ಸಾವಿರ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ಮಾಡಲಾಗುವುದು ಎಂದರು.

<><><>

ಚಿಕ್ಕಮಗಳೂರು ಜಿಲ್ಲೆಯ ಕೆಲವೆಡೆ ಇಂದು ಗಾಳಿ ಸಹಿತ ಮಳೆಯಾಗಿದೆ. ಚಿಕ್ಕಮಗಳೂರು ನಗರದಲ್ಲಿ ಒಂದು ಗಂಟೆಗೂ ಹೆಚ್ಚು ಕಾಲ ಆಲಿಕಲ್ಲು ಸಹಿತ ಮಳೆಯಾಗಿದೆ. ಚಿಕ್ಕಮಗಳೂರು ತಾಲೂಕಿನ ಮೂಕ್ತಿಹಳ್ಳಿ, ವಸ್ತಾರೆ, ಜ್ಯೋತಿನಗರ, ಹಿರೆಮಗಳೂರು, ಇಂದಾವರ, ಅಲ್ಲಂಪುರ ಸೇರಿ ಹಲವೆಡೆ ಗುಡುಗು ಮಿಂಚು ಸಹಿತ ಮಳೆಯಾಗಿದೆ. ಇನ್ನು ಎರಡು ದಿನಗಳ ಕಾಲ ಚಿಕ್ಕಮಗಳೂರು ಜಿಲ್ಲೆಯ ಕೆಲವೆಡೆ ಸಾಧರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><>

ಇನ್ನು ಹವಾವರ್ತಮಾನ

ರಾಜ್ಯದ ದಕ್ಷಿಣ ಒಳನಾಡಿನ ಕೆಲವು ಸ್ಥಳಗಳಲ್ಲಿ ಮತ್ತು ಉತ್ತರ ಒಳನಾಡಿನ ಒಂದೆರೆಡು ಸ್ಥಳಗಳಲ್ಲಿ ಇಂದು ಮಳೆಯಾಗಿದೆ. ಕರಾವಳಿಯಲ್ಲಿ ಒಣಹವೆ ಮುಂದುವರೆದಿದೆ.  ಬೆಂಗಳೂರಿನ ಯಲಹಂಕ ಮತ್ತು ಮದ್ದೂರಿನಲ್ಲಿ ತಲಾ ೬ ಸೆಂಟಿ ಮೀಟರ್ ಮಳೆಯಾಗಿದೆ. ಹೊಸಕೋಟೆ, ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ತಲಾ ೫ ಸೆಂಟಿ ಮೀಟರ್, ಮಾಗಡಿ, ಸರಗೂರು, ಚಿಂತಾಮಣಿ, ನಾಗಮಂಗಲ, ರಾಯಲ್ಪಾಡು, ಬೇಲೂರಿನಲ್ಲಿ ತಲಾ ೨ ಸೆಂಟಿ ಮೀಟರ್, ಕನಕಪುರ, ಹುಣಸೂರು, ಹೆಸರಘಟ್ಟ ಮತ್ತು ಬೆಂಗಳೂರು ಎಚ್‌ಎಎಲ್ ವಿಮಾನ ನಿಲ್ದಾಣದಲ್ಲಿ ತಲಾ ೧ ಸೆಂಟಿ ಮೀಟರ್ ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.  ರಾಜ್ಯದ ಕಲಬುರಗಿಯಲ್ಲಿ ಅತಿ ಹೆಚ್ಚು ೩೮.೨ ಡಿಗ್ರಿ ಸೆಲ್ಸಿಯಸ್, ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಅತಿ ಕಡಿಮೆ ೧೬ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.

<><><>

ಸಂಕ್ಷಿಪ್ತ ಸುದ್ದಿಗಳು-೧

1. ಚಿಕ್ಕಮಗಳೂರು ಜಿಲ್ಲೆಯ ಕುದುರೆಮುಖ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಕಾಡಿಗೆ ಬೆಂಕಿ ಹಚ್ಚುತಿದ್ದ ಆರೋಪದಲ್ಲಿ ನಾಲ್ವರು ಆರೋಪಿಗಳನ್ನು ಅರಣ್ಯ ಇಲಾಖೆ ಸಿಬ್ಬಂದಿ ಬಂಧಿಸಿದ್ದು, ಅವರನ್ನು ಮೂಡಿಗೆರೆ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ
2. ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಕೃಷಿ ಕವಚ ಕಾರ್ಯಕ್ರಮದಡಿ ಕೃಷಿ ಇಲಾಖೆಯ ಯೋಜನೆಗಳ ಕುರಿತ ಕಾರ್ಯಾಗಾರವನ್ನು ಮಂಡ್ಯದಲ್ಲಿ ನಾಳೆ ಆಯೋಜಿಸಲಾಗಿದೆ.
3. ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಪರಿಶಿಷ್ಟ ಸಮುದಾಯದ ಅಭ್ಯರ್ಥಿಗಳಿಗೆ ಪ್ರಸಕ್ತ ಸಾಲಿನಲ್ಲಿ ಪ್ರವಾಸೋದ್ಯಮ ಹಾಗೂ ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲು ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಪ್ರವಾಸೋದ್ಯಮ ಇಲಾಖೆಯ ಬೆಂಗಳೂರು ಗ್ರಾಮಾಂತರ ಕಚೇರಿಯ ದೂರವಾಣಿ ಸಂಖ್ಯೆ: ೦೮೦-೨೨೦೪೦೬೩೩ ಸಂಪರ್ಕಿಸಬಹುದಾಗಿದೆ.
4. ಉತ್ತರ ಕನ್ನಡ ಜಿಲ್ಲೆಯ ಕುಮಟಾದ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆಯ ವತಿಯಿಂದ ಇದೇ ೨೪ ರಿಂದ ಏಪ್ರಿಲ್ ೨ ರವರೆಗೆ ೧೦ ದಿನಗಳ ಜೇನು ಸಾಕಾಣಿಕೆ ಉಚಿತ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: ೯೪೪೯೮೬೦೦೦೭ ಸಂಪರ್ಕಿಸಬಹುದಾಗಿದೆ.
5. ಯುಗಾದಿ ಮತ್ತು ರಂಜಾನ್ ಹಬ್ಬಗಳ ಸಂದರ್ಭದಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ಸರಿದೂಗಿಸಲು ಮೈಸೂರು ಮತ್ತು ವಿಜಯಪುರ ನಡುವೆ ವಿಶೇಷ ಎಕ್ಸ್‌ಪ್ರೆಸ್ ರೈಲು ಕಾರ್ಯಾಚರಣೆಗೆ ರೈಲ್ವೆ ಮಂಡಳಿ ಅನುಮೋದನೆ ನೀಡಿದೆ. ಮೈಸೂರು-ವಿಜಯಪುರ ವಿಶೇಷ ಎಕ್ಸ್‌ಪ್ರೆಸ್ ರೈಲು ಇದೇ ೨೮ರಂದು ಮೈಸೂರಿನಿಂದ ಹೊರಡಲಿದೆ. ಇದೇ ರೀತಿ ಮಾರ್ಚ್ ೩೧ ರಂದು ವಿಜಯಪುರದಿಂದ ಸಂಚಾರ ಆರಂಭಿಸಲಿದೆ.
6. ಯಾದಗಿರಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಇಂದು ಜಿಲ್ಲಾ ಮಟ್ಟದ ರಾಜ್ಯ ಸರಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಿಗೆ ಯಾದಗಿರಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಚಾಲನೆ ನೀಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>